ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗರಸ್ತೆ, ಬೆಂಗಳೂರು**

ಸಂಖ್ಯೆ: ಸಿ1(5)ಪ್ರೌ.ಶಿ.ಸ್ಥಾ.ಪ.ಬಡ್ತಿ/04/2020-21 ದಿನಾಂಕ: 28.10.2020

6.45 PM

**ಜ್ಞಾಪನ**

**ವಿಷಯ :** ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್-2 ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

**ಉಲ್ಲೇಖ :** 1) ಇಲಾಖಾ ಮುಂಬಡ್ತಿ ಸಭೆ ದಿನಾಂಕ:9/09/2020

2) ಈ ಕಛೇರಿಯ ಸಮ ಸಂಖ್ಯೆ ದಿನಾಂಕ:23.10.2020

*********

ಸಾರ್ವಜನಿಕ ಶಿಕ್ಷಣ ಇಲಾಖೆಯ ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಯಿಂದ ಪ್ರೌಢಶಾಲಾ ಗ್ರೂಪ್-ಬಿ ವೃಂದದ ಖಾಲಿ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಲು ಉಲ್ಲೇಖ-2ರಲ್ಲಿ ದಿನಾಂಕ:27.10.2020 ರಿಂದ 29.10.2020ರವರೆಗೆ ಕೌನ್ಸಿಲಿಂಗ್ ದಿನಾಂಕ ನಿಗದಿಪಡಿಸಲಾಗಿತ್ತು. ಕಾರಣಾಂತರದಿಂದ ಉಲ್ಲೇಖ-2 ರಲ್ಲಿ ಕೌನ್ಸಲಿಂಗ್ ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ಮುಂದೂಡಲಾಗಿತ್ತು.

ಮುಂದುವರೆದು ಸದರಿ ಕೌನ್ಸಿಲಿಂಗ್ ದಿನಾಂಕವನ್ನು ಕೆಳಕಂಡಂತೆ ಮರು ನಿಗದಿಪಡಿಸಿದೆ. ಉಳಿದಂತೆ ಹಿಂದಿನ ಎಲ್ಲಾ ನಿಬಂದನೆಗಳು ಮುಂದುವರೆಯುತ್ತವೆ.

ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 18 ಸೇನೌವ 2014 ದಿನಾಂಕ:6.02.2014 ರಂತೆ ಅಂಗವಿಕಲ ನೌಕರರಿಗೆ ಆದ್ಯತೆ ನೀಡಬೇಕಾಗಿದ್ದು, ಕೌನ್ಸಲಿಂಗ್‌ಗೆ ಹಾಜರಾಗುವಾಗ ಅಂಗವಿಕಲ ಅಭ್ಯರ್ಥಿಗಳು ಅಧಿಕೃತ ಮೂಲ ಪ್ರಮಾಣ ಪತ್ರದೊಂದಿಗೆ ಹಾಜರಾಗುವುದು.

**ಕೌನ್ಸಿಲಿಂಗ್ ಸ್ಥಳ: ಶಿಕ್ಷಕರ ಸದನ, ಕೆ.ಜಿ.ರಸ್ತೆ, ಬೆಂಗಳೂರು-560 002**

| ದಿನಾಂಕ | ಪಟ್ಟಿ ಕ್ರಮ ಸಂಖ್ಯೆ ರಿಂದ(ಪೂರ್ವಾಹ್ನ) | ಪಟ್ಟಿ ಕ್ರಮ ಸಂಖ್ಯೆ ರವರೆಗೆ ಅಪರಾಹ್ನ |
|---|---|---|
| 29/10/2020 | - | 01 ರಿಂದ 75 |
| 02/11/2020 | 76-150 | 151-225 |
| 03/11/2020 | 226-300 | 300 ರಿಂದ ಉಳಿದ ಶಿಕ್ಷಕರು |

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

28.10.20
6.45 PM

(ಎನ್.ಕೆಂಚೇಗೌಡ)

ಜಂಟಿ ನಿರ್ದೇಶಕರು(ಆಡಳಿತ)(ಪ್ರಭಾರಿ)

ಪ್ರತಿಯನ್ನು

1) ನಿರ್ದೇಶಕರು(ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ
2) ಕಾರ್ಯದರ್ಶಿ ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಮೈಸೂರು ವಿಭಾಗ, ಮೈಸೂರು ಇವರಿಗೆ ಮಾಹಿತಿಗಾಗಿ
3) ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ)(ಅಭಿವೃದ್ಧಿ) ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕೆ ಹಾಗೂ ಸಂಬಂಧಿಸಿದ ಅರ್ಹ ಶಿಕ್ಷಕರಿಗೆ ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸುವುದು
4) ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ
5) ಕಛೇರಿ